ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರದಿಂದ ಭೂ ಸ್ವಾಧೀನಕ್ಕೆ ಪರಿಹಾರ.

712-ಶ್ರೀ ಬಿ.ಐ. ಪಾಟೀಲ್ (ಉಚಂಗಾವ್): ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರ ಬೆಳಗಾವಿಯು ವಸತಿ ನಿವೇಶನಗಳ ಬಗ್ಗೆ ಜಮೀನು ಭೂಸ್ವಾದೀನ ಮಾಡಿಕೊಂಡಿದ್ದರ ಬಗ್ಗೆ ಭೂ ಪರಿಹಾರ ಧನ ಕೊಡುವುದರಲ್ಲಿ ಬಹಳ ವಿಳಂಬವಾಗಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ರೀತಿ ವಿಳಂಬವಾಗಿದ್ದಲ್ಲಿ ಇದರ ಬಗ್ಗೆ ಪರಿಹಾರ ಧನ ಕೊಡಲು ಸರ್ಕಾರವು ಯಾವ ಕ್ರಮ ತೆಗದುಕೊಳ್ಳಲಾಗಿದೆ?

ಶ್ರೀ ಚೌಡರೆಡ್ಡಿ (ನಗರಾಭಿವೃದ್ಧಿ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಶಿಗ್ಗಾಂವ್ ನಗರದಲ್ಲಿ ಅಂಗನವಾಡಿ ಕೇಂದ್ರ ಪ್ರಾರಂಭ

728- ಶಿಗ್ಗಾಂವ್ ಸಿ. ಕುನ್ನೂರ (ಶಿಗ್ಗಾಂವ್): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿಗ್ಗಾಂವ ತಾಲ್ಲೂಕಿನಲ್ಲಿ ಅಂಗನವಾಡಿ ಕೇಂದ್ರವನ್ನು ಪ್ರಾರಂಭಿಸಲು ರಾಜ್ಯ ಸರ್ಕಾರ ಅಥವಾ ಕೇಂದ್ರ ಸರ್ಕಾರದಿಂದ ಅನುಮತಿ ನೀಡಲಾಗಿದೆಯೆ?

ಆ) ಹಾಗಿದ್ದಲ್ಲಿ, ಇನ್ನೂ ಎಷ್ಟು ದಿನಗಳಲ್ಲಿ ಸದರಿ ಕೇಂದ್ರಗಳನ್ನು ಪ್ರಾರಂಭಿಸಲಾಗುವುದು?

ಶ್ರೀ ಧರ್ಮಸಿಂಗ್ (ಸಮಾಜ ಕಲ್ಯಾಣ ಸಚಿವರು):

ಅ) ಕೇಂದ್ರ ಸರ್ಕಾರವು ಅನುಮತಿ ನೀಡಿದೆ.

ಆ) ರಾಜ್ಯ ಸರ್ಕಾರದ ಆಡಳಿತಾತ್ಮಕ ಮಂಜೂರಾತಿಯನ್ನು ಹಣಕಾಸು ಇಲಾಖೆ ಮತ್ತು ಯೋಜನಾ ಇಲಾಖೆಗಳೊಂದಿಗೆ ಪರಿಶೀಲಿಸಿ, ತ್ವರಿತವಾಗಿ ಜಾರಿಯಲ್ಲಿ ತರಲಾಗುವುದು.

ಶಿಗ್ಗಾಂವ್ ಸವಣೂರು ನಗರ ಸಭೆಯ ಅಭವೃದ್ಧಿ

729- ಶ್ರೀಮಂಜುನಾಥ ಪಿ. ಕುನ್ನೂರ (ಶಿಗ್ಗಾಂವ್): ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿಗ್ಗಾಂವ್ ಅಥವಾ ಸವಣೂರು ಪಟ್ಟಣಗಳನ್ನು ಐ.ಡಿ.ಎಸ್.ಎಂ.ಟಿ. ಸ್ಕೀಮಿನಲ್ಲಿ ಆಳವಡಿಸಲಾಗಿದೆಯೇ?

ಆ) ಹಾಗಿದ್ದಲ್ಲಿ, ಆವುಗಳನ್ನು ಎಷ್ಟು ದಿವಸಗಳಲ್ಲಿ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು?

ಶ್ರೀ ಚೌಡರೆಡ್ಡಿ (ನಗರಾಭಿವೃದ್ಧಿ ಸಚಿವರು):

ಅ) ಇಲ್ಲ.

ಆ) ಮೇಲೆ (ಅ)ಗೆ ಕೊಟ್ಟಿರುವ ಉತ್ತರದಿಂದ ಉದ್ಭವಿಸುವುದಿಲ್ಲ.